ಬೆಂಗಳೂರು ನಗರ ವಿಶ್ವವಿದ್ಯಾನಿಲಯ
BENGALURU CITY UNIVERSITY
Office of the Registrar Evaluation, Central College Campus, Dr Ambedkar Veedhi, Bengaluru – 560001
Ph: 080-22295559/29572003 Mail: registrarevlubcu@gmail.com/regev@bcu.ac.in

ಸಂಖ್ಯೆ: ಬೆಂ.ನ.ವಿ./ಪ.ವಿ./01/ಸ.ಪ/2023–24 | 210 ದಿನಾಂಕ: 12.12.2023

**ಅಧಿಸೂಚನೆ**

ವಿಷಯ: NEP 2020 ಜಾರಿಯಾಗುವ ಪೂರ್ವದಲ್ಲಿ ಸ್ನಾತಕ ಕೋರ್ಸುಗಳಿಗೆ ಪ್ರವೇಶ ಪಡೆದ 1 ರಿಂದ 6ನೇ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ ಸಪ್ಲಿಮೆಂಟರಿ ಪರೀಕ್ಷೆ ನಡೆಸುವ ಬಗ್ಗೆ.

ಉಲ್ಲೇಖ: 1. ಬೆಂಗಳೂರು ನಗರ ವಿಶ್ವವಿದ್ಯಾನಿಲಯ ವಿದ್ಯಾವಿಷಯಕ ಪರಿಷತ್ ಸಭೆಯ ನಿರ್ಣಯ ದಿನಾಂಕ: 21.11.2023.
2. ಮಾನ್ಯ ಕುಲಪತಿಗಳ ಅನುಮೋದನೆಯ ದಿನಾಂಕ: 12.12.2023.

****

ಬೆಂಗಳೂರು ನಗರ ವಿಶ್ವವಿದ್ಯಾನಿಲಯಕ್ಕೆ ಸಂಯೋಜನೆಗೊಂಡಿರುವ ಕಾಲೇಜುಗಳ ಸ್ನಾತಕ ಕೋರ್ಸುಗಳ ವಿದ್ಯಾರ್ಥಿಗಳು ಮತ್ತು ಪ್ರಾಂಶುಪಾಲರು NEP 2020 ಜಾರಿಯಾಗುವ ಪೂರ್ವದಲ್ಲಿ ವಿವಿದ ಕೋರ್ಸುಗಳಿಗೆ ಪ್ರವೇಶ ಪಡೆದ 1 ರಿಂದ 6ನೇ ಸೆಮಿಸ್ಟರ್ ವಿದ್ಯಾರ್ಥಿಗಳು ಸಂಬಂಧಪಟ್ಟ ಪರೀಕ್ಷೆಗಳಲ್ಲಿ ಅನುತ್ತೀರ್ಣರಾಗಿ ಮತ್ತೆ ಪರೀಕ್ಷೆ ಬರೆಯಲು ಒಂದು ವರ್ಷ ಕಾಯುವ ಪರಿಸ್ಥಿತಿ ಇದ್ದು, ವಿದ್ಯಾರ್ಥಿಗಳು ಅವರ ಮುಂದಿನ ವಿದ್ಯಾಭ್ಯಾಸಕ್ಕೆ ತೊಂದರೆಯಾಗುವುದರಿಂದ, ಅಂತಹ ವಿದ್ಯಾರ್ಥಿಗಳಿಗೆ ಮರು ಮೌಲ್ಯಮಾಪನ ಫಲಿತಾಂಶ ಪ್ರಕಟಿಸಿದ ನಂತರ ಸಪ್ಲಿಮೆಂಟರಿ ಪರೀಕ್ಷೆ ನಡೆಸುಲು ಮನವಿ ಮಾಡಿರುತ್ತಾರೆ. ಈ ಹಿನಲೆಯಲ್ಲಿ ವಿಷಯವನ್ನು ದಿನಾಂಕ: 21.11.2023ರಂದು ನಡೆದ ವಿದ್ಯಾವಿಷಯಕ ಪರಿಷತ್ತು ಸಭೆಯ ಮುಂದೆ ಮಂಡಿಸಲಾಗಿತ್ತು.

ದಿನಾಂಕ: 21.11.2023ರಂದು ನಡೆದ ವಿದ್ಯಾವಿಷಯಕ ಪರಿಷತ್ತು ಸಬೆಯ ನಿರ್ಣಯದಂತೆ ಬೆಂಗಳೂರು ನಗರ ವಿಶ್ವವಿದ್ಯಾನಿಲಯದಲ್ಲಿ ಹಾಗೂ ಇದಕ್ಕೆ ಸಂಯೋಜನೆಗೊಂಡಿರುವ ಕಾಲೇಜುಗಳಲ್ಲಿ NEP 2020 ಜಾರಿಯಾಗುವ ಪೂರ್ವದಲ್ಲಿ ಸ್ನಾತಕ ಕೋರ್ಸುಗಳಿಗೆ ಪ್ರವೇಶ ಪಡೆದಿರುವ 1 ರಿಂದ 6ನೇ ಸೆಮಿಸ್ಟರ್‌ಗಳ ವಿದ್ಯಾರ್ಥಿಗಳಿಗೆ ಒಂದು ಬಾರಿಯ ಕ್ರಮವಾಗಿ ಪರೀಕ್ಷೆಗಳನ್ನು ನಡೆಸಲು ವಿದ್ಯಾವಿಷಯಕ ಪರಿಷತ್ತು ಸಭೆ ಅನುಮೋದನೆ ನೀಡಿರುತ್ತದೆ. ಈ ಸಭೆಯ ನಿರ್ಣಯದಂತೆ NEP 2020 ಜಾರಿಯಾಗುವ ಪೂರ್ವದಲ್ಲಿ ಸ್ನಾತಕ ಕೋರ್ಸುಗಳಿಗೆ ಪ್ರವೇಶ ಪಡೆದಿರುವ 1 ರಿಂದ 6ನೇ ಸೆಮಿಸ್ಟರ್‌ಗಳ ವಿದ್ಯಾರ್ಥಿಗಳಿಗೆ ಒಂದು ಬಾರಿ ಪರೀಕ್ಷೆಯನ್ನು ನಡೆಸಲಾಗುವುದು. ಇದಕ್ಕೆ ಸಂಬಂಧಪಟ್ಟಂತೆ ಕುಲಸಚಿವರು (ಮೌಲ್ಯಮಾಪನ)ಅವರು ಪರೀಕ್ಷಾ ಶುಲ್ಕ ಪಾವತಿಯ ಅಧಿಸೂಚನೆಯನ್ನು ಪ್ರಕಟಿಸಿದ ನಂತರ ಆಯಾ ಕಾಲೇಜಿನ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಬೇಕಾಗಿರುತ್ತದೆ. ಸಂಖ್ಯೆಗನುಗುಣವಾಗಿ ವಿಶ್ವವಿದ್ಯಾಲಯಕ್ಕೆ ಅನುಕೂಲವಾದ ಕೇಂದ್ರಗಳಲ್ಲಿ ಮಾತ್ರ ಪರೀಕ್ಷೆ ಸಡೆಸಲಾಗುವುದು.

ಕುಲಸಚಿವರು (ಮೌಲ್ಯಮಾಪನ)

ಕುಲಸಚಿವರು (ಮೌಲ್ಯಮಾಪನ)
ಬೆಂಗಳೂರು ನಗರ ವಿಶ್ವವಿದ್ಯಾನಿಲಯ
ಸೆಂಟ್ರಲ್ ಕಾಲೇಜು ಕ್ಯಾಂಪಸ್
ಬೆಂಗಳೂರು – 560 001

ಗೆ,

1. ಬೆಂಗಳೂರು ನಗರ ವಿಶ್ವವಿದ್ಯಾನಿಲಯಕ್ಕೆ ಸಂಯೋಜನೆಗೊಂಡಿರುವ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ವಿಶ್ವವಿದ್ಯಾನಿಲಯದ ವೆಬ್‌ಸೈಟ್ ನಿರ್ವಾಹಕರು, ಬೆಂಗಳೂರು ನಗರ ವಿಶ್ವವಿದ್ಯಾನಿಲಯ – ಇದನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
3. ಮಾನ್ಯ ಕುಲಪತಿಗಳು/ ಕುಲಸಚಿವರು (ಆ)/ ಕುಲಸಚಿವರು (ಮೌ) ಅವರ ಅಪ್ತ ಕಾರ್ಯದರ್ಶಿಗಳಿಗೆ, ಬೆಂಗಳೂರು ನಗರ ವಿಶ್ವವಿದ್ಯಾನಿಲಯ.